**ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ,**
**ಉಡುಪಿ ಜಿಲ್ಲೆ , ಉಡುಪಿ**

**ಸೆಷನ್ಸ್ ಕೇಸ್ ನಂಃ 27/2017 ಅ.ಸಾ.24**

**ಚಾ.ಸಾ.14**

| | | |
|---|---|---|
| ಸಾಕ್ಷಿದಾರರ ಹೆಸರು | - | ಚಂದ್ರಕಾಂತ್ |
| ತಂದೆಯ ಹೆಸರು | - | ಶ್ರೀಧರ್ |
| ವಯಸ್ಸು | - | 53 ವರ್ಷ |
| ಉದ್ಯೋಗ | - | ಖಾಸಗಿ |
| ವಿಳಾಸ | - | ಬಿಜೈ, ಮಂಗಳೂರು. |

ದಿನಾಂಕಃ 21-11-2025 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದಃ**

ಸುಮಾರು 9 ವರ್ಷದ ಹಿಂದೆ ನಾನು ಮಂಗಳೂರಿನಲ್ಲಿ ಕೆಲಸ ಮಾಡುತ್ತಿದ್ದಾಗ ಮಣಿಪಾಲ ಪೋಲಿಸರು ಬಂದು ಎರಡು ದಾಖಲೆಗಳಿಗೆ ನನ್ನ ಸಹಿ ಪಡೆದುಕೊಂಡಿರುತ್ತಾರೆ. ಸದ್ರಿ ದಾಖಲೆಯಲ್ಲಿ ಬರೆದ ವಿಚಾರ ನನಗೆ ತಿಳಿದಿರುವುದಿಲ್ಲ. ನನ್ನ ಸಮಕ್ಷಮ ಪೋಲಿಸರು ಆರೋಪಿ ರಾಜೇಶ್ ಈತನನ್ನು ದಸ್ತಗಿರಿ ಮಾಡಿರುವುದಿಲ್ಲ ಮತ್ತು ದಸ್ತಗಿರಿ ಮಾಡಿದ ಆರೋಪಿ ರಾಜೇಶ್ ಈತನು ತೋರಿಸಿಕ್ಕೊಟ್ಟಂತೆ ಯಾವುದೇ ಚಿನ್ನಾಭರಣಗಳನ್ನು ಪೋಲಿಸರು ಅಮಾನತ್ತುಪಡಿಸಿ ಕೊಂಡಿರುವುದಿಲ್ಲ. ನಿಪಿ-17 ರ ಮಹಜರಿನಲ್ಲಿರುವ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಸಾಕ್ಷಿಯ ಸಹಿಯನ್ನು ನಿಪಿ-17(ಬಿ) ಎಂದು ಗುರುತಿಸಲಾಯಿತು. ದಸ್ತಗಿರಿ ಮಹಜರನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-63 ಎಂದು, ಸಾಕ್ಷಿಯ ಸಹಿಯನ್ನು ನಿಪಿ-63(ಎ) ಎಂದು ಗುರುತಿಸಲಾಯಿತು.

**( ಈ ಹಂತದಲ್ಲಿ ಅಭಿಯೋಜಕರ ವಿನಂತಿಯ ಮೇರೆಗೆ ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಯಿತು)**

**<u>ಪಾಟಿ ಸವಾಲುಃ ಸರಕಾರಿ ಅಭಿಯೋಜಕರಿಂದಃ</u>**

ದಿನಾಂಕ 19-01-2017 ರಂದು ಪೋಲಿಸರು ನನ್ನ ಹಾಗೂ ಸಹ ಪಂಚರ ಸಮಕ್ಷಮದಲ್ಲಿ ಆರೋಪಿ ರಾಜೇಶ್ ಆಚಾರಿ ಈತನನ್ನು ಮಂಗಳೂರು ರೈಲ್ವೆ ಸ್ಟೇಶನ್ ನ ಪ್ಲಾಟ್ ಫಾರಂ ಪಾರ್ಕ್ ಜಂಕ್ಷನ್ ಬಳಿ ವಶಕ್ಕೆ ಪಡೆದು ನಿಪಿ-63 ರಂತೆ ಮಹಜರು ಬರೆದು ನನ್ನ ಸಹಿ ಪಡೆದುಕೊಂಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ಆರೋಪಿ ಕೊಟ್ಟ ಸ್ವಇಚ್ಛಾ ಹೇಳಿಕೆಯ ಆಧಾರದ ಮೇಲೆ ಆರೋಪಿ ನಮ್ಮನ್ನು ಮತ್ತು ಪೋಲಿಸರನ್ನು ಅತ್ತಾವರದ ಜೈನ್ ಕಂಪೌಂಡಿ ನಲ್ಲಿರುವ ಮಧು ಮೋಹಿನಿ ಎಂಬ ಮನೆಗೆ ಕರೆದುಕೊಂಡು ಹೋಗಿ ಟೇಬಲ್‌ನ ಡ್ರವರ್ ನಿಂದ ಒಂದು ಪ್ಲಾಸ್ಟಿಕ್ ತೊಟ್ಟೆಗಳನ್ನು ತೆಗೆದು ಹಾಜರುಪಡಿಸಿದ್ಧು ಅದರಲ್ಲಿದ್ದ ಚಿನ್ನದ ಕರಿಮಣಿ ಸರ, ಒಂದು ಜೊತೆ ಬೆಂಡೋಲೆ ಹಾಗೂ ರೋಲ್ಡ್ ಗೋಲ್ಡ್ ಜುಮುಕಿಯನ್ನು ಹಾಜರು ಪಡಿಸಿರುತ್ತಾರೆ ಎಂದರೆ ಸರಿಯಲ್ಲ. ಸದ್ರಿ ಸೊತ್ತುಗಳನ್ನು ಪೋಲಿಸರು ನಿಪಿ-17 ರಂತೆ ಮಹಜರು ಬರೆದು ನನ್ನ ಸಮಕ್ಷಮದಲ್ಲಿ ಎಂಓ-1 ರಿಂದ 3 ನ್ನು ಅಮಾನತ್ತು ಪಡಿಸಿಕೊಂಡಿರುತ್ತಾರೆ ಎಂದರೆ ಸರಿಯಲ್ಲ. ಪೋಲಿಸರ ಜೊತೆಗಿದ್ದ ಅಕ್ಕಸಾಲಿಗ ಅವುಗಳನ್ನು ಚಿನ್ನವೆಂದು ದೃಢೀಕರಿಸಿರುತ್ತಾನೆ ಎಂದರೆ ಸರಿಯಲ್ಲ. ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ.

**<u>ಪಾಟಿ ಸವಾಲುಃ ಆರೋಪಿ ಪರ ವಕೀಲರಿಂದಃ</u>** ಇಲ್ಲ

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದರು.

ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉಡುಪಿ.